<u>1ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ</u>
<u>ಬೆಂಗಳೂರು ನಗರ</u>
ಸಿ.ಸಿ. ನಂ. 4319-2021

ಸಿಡಬ್ಲೂ -1 ಪಿಡಬ್ಲೂ-1

| | |
|---|---|
| ಸಾಕ್ಷಿದಾರನ ಹೆಸರು | : ಭೀಮಸೇನ್ ಗಾಟಗೆ |
| ತಂದೆಯ ಹೆಸರು | : ಲೇಟ್ ಜ್ಯೋತಿಬಾ |
| ವಯಸ್ಸು | : 47 ವರ್ಷ |
| ಕೆಲಸ | : ಪಿ ಎಸ್ ಐ (ಉಪ್ಪಾರ ಪೇಟೆ ಪೋ. ಠಾ ) |
| ವಾಸ | : ವಸಂತನಗರ, ಬೆಂಗಳೂರು |

<u>ಸಾಕ್ಷಿಯನ್ನು ದಿನಾಂಕಃ 16-12-2024 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.</u>
<u>ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ</u>

ನಾನು ಡಿಸೆಂಬರ್ 2017 ರಿಂದ ಅಕ್ಟೋಬರ್ 2021 ರವರೆಗೆ ಹೈಗ್ರೌಂಡ್ಸ್ ಪೋಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ. 27-08-2019 ರಂದು ಸೆಂಟ್ ಜಾನ್ಸ ಸೆಂಟ್ರಲ್ ಕಾಲೇಜಿನಿಂದ ಒಂದು ಎಂ ಎಲ್ ಸಿ ವರದಿ ಬಂದಿದ್ದು, ಸದರಿ ವರದಿ ಆಧಾರದ ಮೇಲೆ ಪ್ರಕರಣವನ್ನು ದಾಖಲು ಮಾಡಿ ಪ್ರ ವ ವರದಿಯನ್ನು ದಾಖಲು ಮಾಡಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ಎಂ ಎಲ್ ಸಿ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 1 ಎಂದು ಸಾಕ್ಷಿಯ ಸಹಿಯನ್ನು ನಿಪಿ. 1ಎ ಎಂದು, ಪ್ರ ವ ವರದಿಯನ್ನು ನಿಪಿ. 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ. 2ಎ ಎಂದು ಗುರುತಿಸಲಾಯಿತು.

ಸದರಿ ವರದಿ ಆಧಾರದ ಮೇಲೆ ನಾನು ಆಸ್ಪತ್ರೆಗೆ ಹೋಗಿದ್ದೆ, ಆದರೆ ಅಲ್ಲಿ ಯಾರು ದೂರುದಾರರು ಸಿಗದೇ ಇದ್ದ ಕಾರಣ ಸ್ವಯಂ ನಿವೇದನೆಯನ್ನು ರಚಿಸಿಕೊಂಡು ಈ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ನಿವೇದನೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ. 3ಎ ಎಂದು ಗುರುತಿಸಲಾಯಿತು.

ಅದೇ ದಿನ ಮಧ್ಯಾನ್ನ 03.30 ರಿಂದ 04.15 ವರೆಗೆ ಚಾಸಾ 2 ಮತ್ತು 3 ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಮಾಡಿರುತ್ತೇನೆ. ಸಾಕ್ಷಿಯು ಸದರಿ ದಾಖಲೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 4 ಎಂದು, ಸಾಕ್ಷಿಯ ಸಹಿಯನ್ನು

ನಿಪಿ. 4ಎ ಎಂದು ಗುರುತಿಸಲಾಯಿತು. ನಂತರ ಚಾಸಾ 5 ರಿಂದ 9 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ದಿ. 18-09-2019 ರಂದು 1 ರಿಂದ 3 ನೇ ಆರೋಪಿತರು ಠಾಣೆಗೆ ಹಾಜರಾಗಿದ್ದು ಅವರ ವಿರುದ್ಧ ದಸ್ತಗಿರಿ ಕ್ರಮ ಅನುಸರಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ, ಈ ದಿನ ಆರೋಪಿತರು ಗೈರು ಹಾಜರಿದ್ದು, ಗುರುತಿಸುವಿಕೆಗೆ ತಕರಾರು ಇರುವುದಿಲ್ಲ.

ದಿ. 30-10-2019 ರಂದು ಗಾಯಾಳುಆದ ಚಾಸಾ 4 ರವರು ಠಾಣೆಗೆ ಹಾಜರಾಗಿದ್ದು, ಅವರ ಹೇಳಿಕೆಯನ್ನು ಪಡೆದಿರುತ್ತೇನೆ. ದಿ. 28-01-2020 ರಂದು ಆಸ್ಪತ್ರೆಯಿಂದ ಚಾಸಾ 4 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಸಾಕ್ಷಿಯು ಸದರಿ ದಾಖಲೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ. 5ಎ ಎಂದು ಗುರುತಿಸಲಾಯಿತು.

ದಿ. 28-01-2020 ರಂದು ಕೆ 2 ಕೆ ಕಂಪನಿಗೆ ಠಾಣಾಧಿಕಾರಿಯಾದ ಸಿದ್ದೇಗೌಡರು ದಾಖಲಾತಿಗಳನ್ನು ಹಾಜರುಪಡಿಸುವಂತೆ ನೋಟೀಸನ್ನು ನೀಡಿದ್ದು, ದಿ. 28-08-2020 ರಂದು ಸದರಿ ಕಂಪನಿಯವರು ದಾಖಲೆಗಳನ್ನು ತಂದು ಹಾಜರುಪಡಿಸಿದ್ದು, ಅವುಗಳನ್ನು ಪರಿಶೀಲಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಮುಖಪುಟದ ದಾಖಲೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ನಿಪಿ. 6 ಎಂದು ಸಾಕ್ಷಿಯ ಸಹಿಯನ್ನು ನಿಪಿ. 6ಎ ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ. 6 ರ ಜೊತೆ ಲಗತ್ತಿಸಿದ ದಾಖಲೆಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ. 7 ರಿಂದ 13 ಎಂದು, ನಿಪಿ. 11 ಮತ್ತು 12 ರಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ. 11ಎ ಮತ್ತು 12ಎ ಎಂದು ಗುರುತಿಸಲಾಯಿತು. ದಿ. 06-12-22020 ರಂದು ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ಅಂತಿಮ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

<u>ಪಾಟೀ ಸವಾಲು ಆರೋಪಿತರ ಪರ ಶ್ರೀ ಎ ಕೆ ಕೆ ವಕೀಲರಿಂದಃ</u>

ಚಾಸಾ 2 ಮತ್ತು 3 ರವರು ಚಾಸಾ 4 ರವರ ಜೊತೆ ಕೆಲಸ ಮಾಡುತ್ತಿರಲಿಲ್ಲ. ಸೆಪ್ಟಿ ಜಾಕೇಟ್ ಗಳನ್ನು ಕೊಟ್ಟಿರಲಿಲ್ಲ. ಆ ದಿನ ಸೆಪ್ಟಿ ಜಾಕೇಟ್ ಗಳನ್ನು ಕೊಟ್ಟಿದ್ದರೂ ಸಹ ನಾವು ನಿಪಿ. 2 ರಲ್ಲಿ ನಮೂದಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ 2 ಮತ್ತು 3 ರವರಿಗೆ ಪಂಚನಾಮೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಿರುವುದಿಲ್ಲ. ನಾನು ಘಟನೆಯನ್ನು ಕಣ್ಣಾರೆ ನೋಡಿರುವುದಿಲ್ಲ ಎಂದರೆ ಸರಿ. ಸಂಬಂಧಪಟ್ಟ ಸಾಕ್ಷಿದಾರರನ್ನು ವಿಚಾರಣೆಗೆ ಒಳಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ನಿರ್ಲಕ್ಷತನದಿಂದ ಯಾವುದೇ ಘಟನೆ ನಡೆದಿರುವುದಿಲ್ಲ ಎಂದರೆ ಸರಿಯಲ್ಲ.  ಆ ದಿನ ಆರೋಪಿಯು ಸುರಕ್ಷಿತ ಪರಿಕರಣಗಳನ್ನು ಕೊಟ್ಟಿದ್ದರು ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ</u>

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ